# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part – IVA | ಬೆಂಗಳೂರು, ಮಂಗಳವಾರ, ೧೦, ಫೆಬ್ರವರಿ, ೨೦೨೬ ( ಮಾಘ , ೨೧, ಶಕವರ್ಷ, ೧೯೪೭)<br>BENGALURU, TUESDAY, 10, FEBRUARY, 2026 ( MAGHA , 21, SHAKAVARSHA, 1947) | ನಂ. ೧೪೫<br>No. 145 |
|---|---|---|

**<u>ಕರ್ನಾಟಕ ಸರ್ಕಾರ</u>**

ಸಂಖ್ಯೆ: ನಅಇ 08 ಬೆಂರೂಪ್ರಾ 2026(ಇ)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಡಾ. ಬಿ.ಆರ್. ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ: 09-02-2026

**<u>ಅಧಿಸೂಚನೆ</u>**

ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 261 ಬೆಂರೂಪ್ರಾ 2024, ಬೆಂಗಳೂರು, ದಿನಾಂಕ:27-11-2024 ರಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 4(ಎ) ರಡಿಯಲ್ಲಿ ಪ್ರದತ್ತವಾದ ಅಧಿಕಾರದನ್ವಯ ಚಿಂತಾಮಣಿ ನಗರಸಭೆ ಮತ್ತು ಪಟ್ಟಣ ಒಳಗೊಂಡಂತೆ ಸ್ಥಳೀಯ ಯೋಜನಾ ಪ್ರದೇಶದ 10 ಗ್ರಾಮಗಳನ್ನು ಹಾಗೂ 99 ಪೂರ್ಣಗ್ರಾಮಗಳು ಹಾಗೂ ಭಾಗಶಃ 01 ಗ್ರಾಮವನ್ನು ಸೇರಿಸಿಕೊಂಡು ಪರಿಷ್ಕೃತ ಸ್ಥಳೀಯ ಯೋಜನಾ ಪ್ರದೇಶವನ್ನು ಘೋಷಿಸಿ, ಎಲ್ಲೆಯನ್ನು ಪರಿಷ್ಕರಿಸಿ ಆದೇಶಿಸಲಾಗಿದೆ.

ಚಿಂತಾಮಣಿ ಪಟ್ಟಣವು ತಾಲ್ಲೂಕು ಕೇಂದ್ರ ಸ್ಥಾನವಾಗಿದ್ದು, ಚಿಂತಾಮಣಿ ಪಟ್ಟಣದ ಯೋಜನಾಬದ್ಧ ಬೆಳವಣಿಗೆಯ ಉದ್ದೇಶದಿಂದ ಹಾಗೂ ಸದರಿ ಪ್ರದೇಶದ ವ್ಯಾಪ್ತಿಯಲ್ಲಿನ ಅಭಿವೃದ್ಧಿಗಳನ್ನು ನಿಯಂತ್ರಿಸಲು ಚಿಂತಾಮಣಿ ನಗರಾಭಿವೃದ್ಧಿ ಪ್ರಾಧಿಕಾರವನ್ನಾಗಿ ಪುನರ್ ರಚಿಸಲು ಸರ್ಕಾರವು ನಿರ್ಧರಿಸಿದೆ.

ಅದರಂತೆ, ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರದ ಕಾಯ್ದೆ 1987 ರ ಕಲಂ 3ರ ಉಪ ಕಲಂ (1) ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ದಿನಾಂಕ:09.02.2026 ರಿಂದ ಜಾರಿಗೆ ಬರುವಂತೆ ಚಿಂತಾಮಣಿ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯ ಅಭಿವೃದ್ಧಿಗಾಗಿ ಚಿಂತಾಮಣಿ ನಗರಾಭಿವೃದ್ಧಿ ಪ್ರಾಧಿಕಾರವನ್ನು ರಚಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಲತಾ.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ,
(ಅಭಿವೃದ್ಧಿ ಪ್ರಾಧಿಕಾರ ಮತ್ತು ನಯೋಸೇ),
ನಗರಾಭಿವೃದ್ಧಿ ಇಲಾಖೆ

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



THAMMAIAH